ಭಾರತೀಯ ಜನತಾ ಪಾರ್ಟಿ–ಕರ್ನಾಟಕ
Bharatiya Janatha Party-Karnataka
# 48, "ಜಗನ್ನಾಥ ಭವನ", ದೇವಸ್ಥಾನದ ಬೀದಿ, 11ನೇ ಅಡ್ಡರಸ್ತೆ, ಮಲ್ಲೇಶ್ವರ, ಬೆಂಗಳೂರು–560003.
ದೂ.: 080–22041976, 23569999, ಫ್ಯಾಕ್ಸ್: 080–23460398

**17–4–2025**

**ಗೆ,**

**ಸಂಪಾದಕರು / ವರದಿಗಾರರು.**

**ಪ್ರಕಟಣೆಯ ಕೃಪೆಗಾಗಿ**

***ಹಿಂದೂಗಳಿಗೆ ಯಾತಕ್ಕೋಸ್ಕರ ಅಪಮಾನ ಮಾಡುತ್ತಿದ್ದೀರಿ..?***

# ಮುಖ್ಯಮಂತ್ರಿ ಸ್ಥಾನದಲ್ಲಿ ಬಡವರ, ದಲಿತರ, ರೈತರ ಕಣ್ಣೀರು ಒರೆಸಿದ್ದೀರಾ?: ವಿಜಯೇಂದ್ರ ಪ್ರಶ್ನೆ

ಬಾಗಲಕೋಟೆ: ಮಾನ್ಯ ಸಿದ್ದರಾಮಯ್ಯನವರೇ ನೀವು ಮುಖ್ಯಮಂತ್ರಿ ಸ್ಥಾನದಲ್ಲಿ ಬಡವರ, ದಲಿತರ, ರೈತರ ಕಣ್ಣೀರು ಒರೆಸಿದ್ದೀರಾ? ಅಭಿವೃದ್ಧಿ ಕೆಲಸ ಮಾಡಿದ್ದೀರಾ? ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ಅವರು ಪ್ರಶ್ನಿಸಿದ್ದಾರೆ.

ಇಲ್ಲಿ ಇಂದು ಜನಾಕ್ರೋಶ ಯಾತ್ರೆಯ ಸಂದರ್ಭದಲ್ಲಿ ಸರಕಾರದ ವಿರುದ್ಧ ಬಾರುಕೋಲು ಪ್ರದರ್ಶಿಸಿದ ಅವರು ಬಳಿಕ ಸಸಿಗೆ ನೀರೆರೆದರು. ನಂತರ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ಜನಾಕ್ರೋಶ ಯಾತ್ರೆಯ ಮೊದಲ ಹಂತ ಯಶಸ್ವಿಯಾಗಿ ಮುಗಿದಿದೆ ಎಂದು ಹೇಳಿದರು. ಮಾನ್ಯ ಸಿದ್ದರಾಮಯ್ಯನವರೇ, ನೀವು ಮುಖ್ಯಮಂತ್ರಿಗಳಾದ ಬಳಿಕ ರೈತರ ಆತ್ಮಹತ್ಯೆ ಹೆಚ್ಚಾಗಿದೆ.

ಹಿಂದೂ ಹೆಣ್ಮಕ್ಕಳ ಮೇಲೆ ಅಪಮಾನ, ಲವ್ ಜಿಹಾದ್ ಹೆಚ್ಚಾಗಿದೆ. ಗೋಹತ್ಯೆಗಳು ಜಾಸ್ತಿ ಆಗಿದೆ. ಅದಕ್ಕಾಗಿ ಮುಂದಿನ ದಿನಗಳಲ್ಲಿ ಜನರು ನಿಮ್ಮನ್ನು ನೆನಪಿಸಿಕೊಳ್ಳಬೇಕೇ ಎಂದು ಕೇಳಿದರು.

ಹಿಂದೆ ಯಡಿಯೂರಪ್ಪನವರ ಬಿಜೆಪಿ ಸರಕಾರ ಇದ್ದಾಗ ರೈತರು ತಮ್ಮ ಹೊಲಕ್ಕೆ ಟ್ರಾನ್ಸ್‌ಫಾರ್ಮರ್ ಹಾಕಿಸಲು 25 ಸಾವಿರ ಕಟ್ಟಿದ್ದರೆ ಸಾಕಾಗಿತ್ತು. ಆದರೆ, ರೈತಪರ ಮೊಸಳೆ ಕಣ್ಣೀರು ಹಾಕುವ ಸಿದ್ದರಾಮಯ್ಯನವರ ಸರಕಾರದಲ್ಲಿ ಎರಡೂವರೆಯಿಂದ 3 ಲಕ್ಷ ರೂ. ಕಟ್ಟಬೇಕಿದೆ ಎಂದು ಟೀಕಿಸಿದರು.

ಹಿಂದೆ 5 ವರ್ಷ ನೀವು ಸಿಎಂ ಆಗಿದ್ದಾಗ ಏನು ಸಾಧನೆ ಮಾಡಿದ್ದೀರಿ ಸಿದ್ದರಾಮಯ್ಯನವರೇ ಎಂದು ಕೇಳಿದರು. ಹಿಂದಿನ ಬಾರಿ ವೀರಶೈವ ಧರ್ಮ ಎಂದು ರಾಜ್ಯದಲ್ಲಿ ಬೆಂಕಿ ಹಚ್ಚುವ ಕೆಲಸ ಮಾಡಿದ್ದೀರಲ್ಲವೇ ಎಂದು ಆಕ್ಷೇಪಿಸಿದರು. ಅದಕ್ಕಾಗಿ ರಾಜ್ಯದ ಜನ ನಿಮ್ಮನ್ನು ನೆನಪಿಟ್ಟುಕೊಳ್ಳಬೇಕೇ ಎಂದರು.

ಮುಸಲ್ಮಾನರಿಗೆ ಸರಕಾರಿ ಕಾಮಗಾರಿಯಲ್ಲಿ ಶೇ 4ರಷ್ಟು ಮೀಸಲಾತಿ ಕೊಡುತ್ತಿದ್ದೀರಿ. ಯಾರಪ್ಪನ ದುಡ್ಡು ಸ್ವಾಮಿ ಎಂದು ಪ್ರಶ್ನೆಯನ್ನು ಮುಂದಿಟ್ಟರು. ಮುಸಲ್ಮಾನರ ಹೆಣ್ಮಕ್ಕಳಿಗೆ ಮದುವೆಗೆ 50 ಸಾವಿರ ಕೊಡುತ್ತಾರಂತೆ. ಹಿಂದೂಗಳಲ್ಲಿ ಬಡವರಿಲ್ಲವೇ? ಮುಸಲ್ಮಾನ ಯುವಜನರು ವಿದೇಶಕ್ಕೆ ಉನ್ನತ ಶಿಕ್ಷಣ ಪಡೆಯಲು ಹೋಗುವುದಾದರೆ 30 ಲಕ್ಷ ನೀಡುವುದಾಗಿ ಹೇಳಿದ್ದೀರಿ. ಹಿಂದೂಗಳಲ್ಲಿ ಬಡವರಿಲ್ಲವೇ ಹಾಗಿದ್ದರೆ ಎಂದು ಪ್ರಶ್ನಿಸಿದರು. ಹಿಂದೂಗಳಿಗೆ ಯಾತಕ್ಕೋಸ್ಕರ ಅಪಮಾನ ಮಾಡುತ್ತಿದ್ದೀರಿ ಎಂದು ಕೇಳಿದರು.

ರಾಜ್ಯದಲ್ಲಿ ಯಾವುದೇ ಲೋಕಸಭಾ, ವಿಧಾನಸಭಾ ಚುನಾವಣೆ ಇಲ್ಲ. ಆದರೂ, ನಾವು ಜನಾಕ್ರೋಶ ಯಾತ್ರೆ ಹಮ್ಮಿಕೊಂಡಿದ್ದೇವೆ. ಅಭಿವೃದ್ಧಿ ಕೆಲಸ, ಸರ್ವತೋಮುಖ ಅಭಿವೃದ್ಧಿಯ ಭರವಸೆ ನೀಡಿ ಕಾಂಗ್ರೆಸ್ಸಿನವರು ಅಧಿಕಾರಕ್ಕೆ ಬಂದವರು. ಆದರೆ, ಸಿದ್ದರಾಮಯ್ಯನವರ ನೇತೃತ್ವದ ಜನವಿರೋಧಿ, ರೈತ ವಿರೋಧಿ, ಹಿಂದೂ ವಿರೋಧಿ ಸರಕಾರ ಇದೆ. 50ಕ್ಕೂ ಜನೋಪಯೋಗಿ ವಸ್ತುಗಳ ಬೆಲೆ ಏರಿಸಿದ್ದಾರೆ ಎಂದು ಟೀಕಿಸಿದರು. ಪರಿಶಿಷ್ಟ ಜಾತಿ, ಜನಾಂಗದ 38 ಸಾವಿರ ಕೋಟಿ

ಹಣವನ್ನು ದುರುಪಯೋಗ ಮಾಡಿಕೊಂಡಿದೆ. ಅಲ್ಪಸಂಖ್ಯಾತರ ತುಷ್ಟೀಕರಣ ಹೆಚ್ಚಾಗಿದೆ ಎಂದು ಆಕ್ಷೇಪಿಸಿದರು.

ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ ಶೆಟ್ಟರ್, ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಪಿ.ಸಿ. ಗದ್ದಿಗೌಡರ್, ಮಾಜಿ ಸಚಿವ ಬಿ. ಶ್ರೀರಾಮುಲು, ರಾಜ್ಯಸಭಾ ಸದಸ್ಯ ನಾರಾಯಣಸಾ ಕೆ. ಭಾಂಡಗೆ, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ವಿಧಾನಪರಿಷತ್ ಸದಸ್ಯ ಹನುಮಂತ ನಿರಾಣಿ, ಪಿ.ಹೆಚ್. ಪೂಜಾರ, ಶಾಸಕ ಜಗದೀಶ್ ಗುಡಗಂಟಿ, ಮಾಜಿ ಶಾಸಕರಾದ ವೀರಣ್ಣ ಚರಂತಿಮಠ, ದೊಡ್ಡನಗೌಡ ಜಿ. ಪಾಟೀಲ್, ರೈತ ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ಮಾಜಿ ಶಾಸಕ ಎ.ಹೆಚ್. ಪಾಟೀಲ್ ನಡಹಳ್ಳಿ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್, ಬಾಗಲಕೋಟೆ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ್, ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಪದಾಧಿಕಾರಿಗಳು, ಮಂಡಲ ಅಧ್ಯಕ್ಷರು ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು.

(ಕರುಣಾಕರ ಖಾಸಲೆ)

ಮಾಧ್ಯಮ ಸಂಚಾಲಕರು

ಬಿಜೆಪಿ ಕರ್ನಾಟಕ

# 48, "JAGANNATHA BHAVAN", Temple Street, 11th Cross, Malleshwara, Bengaluru-560003.
Phone: 080-22041976, 23569999, Fax: 080-23460398
e-mail: bjponline@gmail.com, web: www.bjpkarnataka.org